**All India Radio: Bangalore**
**Regional Bulletin In Kannada**
**14.06.2026 / 2.30 p.m.**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**14.06.2026 / 2.30 p.m.**

**<><><><>**

ಮುಖ್ಯಾಂಶಗಳು

1. ಯುಪಿಎ ಅವಧಿಗೆ ಹೋಲಿಸಿದರೆ ಕೇಂದ್ರದಿಂದ ರಾಜ್ಯಕ್ಕೆ ೫ ಪಟ್ಟು ಹೆಚ್ಚಿನ ತೆರಿಗೆ ಹಂಚಿಕೆ - ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್
2. ಆರೋಗ್ಯ ಕ್ಷೇತ್ರದ ಮೂಲಸೌಕರ್ಯ ನಿರ್ಮಾಣ, ಸುಧಾರಣೆಗೆ ಕೇಂದ್ರದ ಒತ್ತು - ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ
3. ಸಂಶೋಧನೆ ಮತ್ತು ನಾವೀನ್ಯತೆ ಕ್ಷೇತ್ರದಲ್ಲಿ ಭಾರತ ಮುಂಚೂಣಿ ರಾಷ್ಟ್ರ - ಕೇಂದ್ರ ಸಚಿವ ಡಾ.ಜಿತೇಂದ್ರ ಸಿಂಗ್
4. ಇಂದು ವಿಶ್ವ ರಕ್ತದಾನಿಗಳ ದಿನ ; ಹಲವೆಡೆ ಜಾಗೃತಿ ಕಾರ್ಯಕ್ರಮ- ರಕ್ತದಾನಕ್ಕೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಕರೆ

<><><><>

ಹಿಂದಿನ ಯುಪಿಐ ಅವಧಿಗೆ ಹೋಲಿಸಿದರೆ ಈಗಿನ ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಐದು ಪಟ್ಟು ಹೆಚ್ಚು ತೆರಿಗೆ ಹಂಚಿಕೆಯಾಗಿದೆ ಎಂದು ಕೇಂದ್ರ ವಿತ್ತ ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ನಡೆದ ವಿಕಸಿತ ಭಾರತ ಸಂಕಲ್ಪ ಸಮಾವೇಶದಲ್ಲಿ ಮಾತನಾಡಿದ ಅವರು, ಕೇಂದ್ರದಿಂದ ತೆರಿಗೆ ಹಂಚಿಕೆ ವಂಚನೆ ಕುರಿತ ರಾಜ್ಯ ಸರ್ಕಾರದ ಆರೋಪಗಳನ್ನು ನಿರಾಕರಿಸಿದರು. ರಾಜ್ಯಕ್ಕೆ ಹಂಚಿಕೆಯಾದ ತೆರಿಗೆ ವಿವರಗಳನ್ನು ಒದಗಿಸಿದ ಸಚಿವರು ರಾಜ್ಯವು ೪ ಲಕ್ಷ ಕೋಟಿ ರೂಪಾಯಿ ತೆರಿಗೆ ಹಂಚಿಕೆಯನ್ನು ಪಡೆದುಕೊಂಡಿದೆ ಎಂದು ಹೇಳಿದರು. ಬಂಡವಾಳ ಆಸ್ತಿಗಳಲ್ಲಿ ಹೂಡಿಕೆ ಮಾಡಲು ರಾಜ್ಯಕ್ಕೆ ೫೦ ವರ್ಷಗಳವರೆಗೆ ೧೮ ಸಾವಿರ ಕೋಟಿ ರೂಪಾಯಿ ಬಡ್ಡಿರಹಿತ ಸಾಲ ನೀಡಲಾಗಿದೆ. ೮ ಸಾವಿರದ ೧೦೦ ಕಿಲೋಮೀಟರ್ ರಾಷ್ಟ್ರೀಯ ಹೆದ್ದಾರಿಗಳನ್ನು ನಿರ್ಮಿಸಲು ೬೩ ಸಾವಿರ ಕೋಟಿ ರೂಪಾಯಿ ಕೇಂದ್ರ ನಿಧಿ ನೀಡಲಾಗಿದೆ. ರೈಲ್ವೆ ಮೂಲಸೌಕರ್ಯಕ್ಕಾಗಿ ೭ ಸಾವಿರದ ೭೦೦ ಕೋಟಿ,

ಬೆಂಗಳೂರು-ಚೆನ್ನೈ ಕಾರಿಡಾರ್ ಯೋಜನೆಗೆ ೭ ಸಾವಿರ ಕೋಟಿ ರೂಪಾಯಿ ಒದಗಿಸಲಾಗಿದೆ ಎಂದು ಹಣಕಾಸು ಸಚಿವರು ಮಾಹಿತಿ ನೀಡಿದರು. ನವೀಕರಿಸಬಹುದಾದ ಇಂಧನ ಯೋಜನೆಗಳನ್ನು ಕೈಗೆತ್ತಿಕೊಳ್ಳಲು ೧ ಸಾವಿರದ ೩೫೪ ಕೋಟಿ ರೂಪಾಯಿ ಅನುದಾನ ಮಂಜೂರು ಮಾಡಲಾಗಿದೆ. ಮುಂದಿನ ವರ್ಷ ಜೂನ್ ವೇಳೆಗೆ ಕೊಪ್ಪಳ ಮತ್ತು ಗದಗ ಹಸಿರು ಶಕ್ತಿಯ ಕೇಂದ್ರವಾಗಲಿದೆ. ಜನಧನ್, ಮುದ್ರಾ, ಆಯುಷ್ಮಾನ್ ಇನ್ನಿತರ ಕೇಂದ್ರದ ಯೋಜನೆಗಳು ಹಾಗೂ ನವೋದ್ಯಮಗಳಿಗೆ ನೀಡಿದ ಪ್ರೋತ್ಸಾಹದಿಂದ ಕರ್ನಾಟಕವು ಪ್ರಯೋಜನ ಪಡೆದಿದೆ ಎಂದು ನಿರ್ಮಲಾ ಸೀತಾರಾಮನ್ ತಿಳಿಸಿದರು.

<><><><>

ಪ್ರಧಾನಿ ನರೇಂದ್ರ ಮೋದಿ ಅವರ ಕಳೆದ ೧೨ ವರ್ಷಗಳ ಜನಪರ ಆಡಳಿತದಲ್ಲಿ ಆರೋಗ್ಯ ಕ್ಷೇತ್ರದ ಮೂಲಸೌಕರ್ಯ ನಿರ್ಮಾಣ ಮತ್ತು ಸುಧಾರಣೆಗೆ ಅನೇಕ ಕ್ರಮಗಳನ್ನು ಕೈಗೊಳ್ಳಲಾಗಿದೆ ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿದ್ದಾರೆ. ಮಂಡ್ಯ ವೈದ್ಯಕೀಯ ವಿಜ್ಞಾನ ಸಂಸ್ಥೆ-ಮಿಮ್ಸ್‌ನಲ್ಲಿ ನೂತನವಾಗಿ ನಿರ್ಮಿಸಲಾಗಿರುವ ಅತ್ಯಾಧುನಿಕ ಲಿಫ್ಟ್, ಮತ್ತಿತರ ಅಭಿವೃದ್ಧಿ ಕಾಮಗಾರಿಗಳನ್ನು ಉದ್ಘಾಟಿಸಿ ಮಾತನಾಡಿದ ಅವರು, ಕೇಂದ್ರ ಸರಕಾರದ ನೀಡಿರುವ ಒಂದೂವರೆ ಕೋಟಿ ರೂಪಾಯಿ, ಕಾರ್ಪೊರೇಟ್ ಸಾಮಾಜಿಕ ಹೊಣೆಗಾರಿಕೆ ಅನುದಾನದಲ್ಲಿ ಮೂಲಸೌಕರ್ಯಗಳನ್ನು ಕಲ್ಪಿಸಲಾಗಿದೆ. ಇದರಿಂದ ಸಾರ್ವಜನಿಕರಿಗೆ ಅನುಕೂಲವಾಗಲಿದೆ ಎಂದರು. ಜಗತ್ತಿನಲ್ಲಿಯೇ ಅತಿದೊಡ್ಡ ಆರೋಗ್ಯ ವಿಮಾ ಯೋಜನೆಯನ್ನು ಅನುಷ್ಠಾನ ಮಾಡಲಾಗಿದೆ. ಆರೋಗ್ಯವಂತ ಮತ್ತು ಸಶಕ್ತ ಭಾರತ ನಿರ್ಮಾಣಕ್ಕೆ ಕೇಂದ್ರ ಸರ್ಕಾರ ಬದ್ಧವಾಗಿದೆ ಎಂದು ಅವರು ಇದೇ ವೇಳೆ ತಿಳಿಸಿದ್ದಾರೆ.

<><><><>

ಸಂಶೋಧನೆ ಮತ್ತು ನಾವೀನ್ಯತೆ ಕ್ಷೇತ್ರದಲ್ಲಿ ಭಾರತ ಮುಂಚೂಣಿ ರಾಷ್ಟ್ರವಾಗಿ ಹೊರಹೊಮ್ಮುತ್ತಿದೆ ಎಂದು ಕೇಂದ್ರ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವ ಡಾ.ಜಿತೇಂದ್ರ ಸಿಂಗ್ ಬೆಂಗಳೂರಿನಲ್ಲಿ ನಿನ್ನೆ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಆಯೋಜಿತ, ಆರನೇ ಸಿಎಸ್ಐಆರ್ ರೈಸ್ ಸಮಾವೇಶದಲ್ಲಿ ಮಾತನಾಡಿದ ಅವರು, ಭಾರತವು ನಾವೀನ್ಯತೆ ಮತ್ತು ಸಮಸ್ಯೆ ಪರಿಹಾರ ಸಾಮರ್ಥ್ಯಗಳನ್ನು ಪ್ರೋತ್ಸಾಹಿಸುವ ರಾಷ್ಟ್ರೀಯ ಶಿಕ್ಷಣ ನೀತಿಯನ್ನು ಅಳವಡಿಸಿಕೊಳ್ಳುವ ಮೂಲಕ ಪದವಿ ಕೇಂದ್ರೀತ ವಿಧಾನದಿಂದ ಕ್ರಮೇಣ ದೂರ ಸರಿಯುತ್ತಿವೆ ಎಂದರು. ಪೇಟೆಂಟ್ ಸಲ್ಲಿಕೆಯಲ್ಲಿ

ಭಾರತ ಇಂದು ವಿಶ್ವದಲ್ಲಿ ಆರನೇ ಸ್ಥಾನದಲ್ಲಿದೆ. ಜಾಗತಿಕ ನಾವೀನ್ಯತಾ ಸೂಚ್ಯಂಕದಲ್ಲಿ ಭಾರತದ ಶ್ರೇಯಾಂಕ ೮೧ನೇ ಸ್ಥಾನದಿಂದ ೩೮ನೇ ಸ್ಥಾನಕ್ಕೆ ಏರಿದೆ. ಅಗ್ರ ೧೦೦ ಉಲ್ಲೇಖಗಳಲ್ಲಿ ಶೇಕಡ ೧೦ರಷ್ಟು ಭಾರತದ ಕೊಡುಗೆಗಳಾಗಿವೆ ಎಂದು ಶ್ಲಾಘಿಸಿದರು. ಭಾರತದಲ್ಲಿ ಎರಡು ಲಕ್ಷದ ೩೦ ಸಾವಿರ ನವೋದ್ಯಮಗಳಿವೆ.  ದೇಶದ ೨ ಮತ್ತು ೩ನೇ ಹಂತದ ನಗರಗಳಲ್ಲಿ ೨೫ ಲಕ್ಷ ಯುವಜನರಿಗೆ ಉದ್ಯೋಗಾವಕಾಶ ಲಭಿಸಿದೆ ಎಂದು ಅವರು ಹೇಳಿದರು. ಎರಡು ದಿನಗಳ ರೈಸ್ ಸಮಾವೇಶದಲ್ಲಿ ಏರೋಸ್ಪೇಸ್, ಆಹಾರ ತಂತ್ರಜ್ಞಾನ, ಕೃತಕಬುದ್ಧಿಮತ್ತೆ ಕ್ಷೇತ್ರದಲ್ಲಿ ೧೦೦ಕ್ಕೂ ಹೆಚ್ಚು ನವೋದ್ಯಮಗಳು ತನ್ನ ಉತ್ಪನ್ನಗಳನ್ನು ಪ್ರದರ್ಶಿಸುತ್ತಿವೆ. ಉದ್ಘಾಟನಾ ಸಮಾರಂಭದಲ್ಲಿ ಜಂಟಿ ಸಂಶೋಧನೆ ಮತ್ತು ಅಭಿವೃದ್ಧಿ ಪ್ರಯತ್ನಗಳಿಗಾಗಿ ಐಐಟಿ ಧಾರವಾಡ, ಐಐಟಿಎಂ ಚೆನ್ನೈ ಮತ್ತು ನಿವೇದಿ ಐಸಿಎಆರ್ ಒಪ್ಪಂದಗಳಿಗೆ ಸಹಿ ಹಾಕಿದವು.

<><><><>

ದೇಶದ ಎಡಪಂಥೀಯ ಉಗ್ರವಾದ ಬಾಧಿತ ಪ್ರದೇಶಗಳು ಸೇರಿದಂತೆ ವಿದೇಶಿ ಡೆಬಿಟ್ ಕಾರ್ಡ್ ಜಾಲಗಳ ಮೂಲಕ ವಿದೇಶಿ ಹಣವನ್ನು ಅಕ್ರಮವಾಗಿ ಬಳಸಿಕೊಂಡಿರುವ ಆರೋಪದಲ್ಲಿ ಜಾರಿ ನಿರ್ದೇಶನಾಲಯ- ಇಡಿ ನೀಡಿರುವ ದೂರಿನ ಆಧಾರದಲ್ಲಿ ಅಮೆರಿಕ ಮೂಲದ ಸಂಸ್ಥೆ ಮತ್ತು ಇತರ ಆರು ಜನರ ವಿರುದ್ಧ ಪ್ರಕರಣ ದಾಖಲಾಗಿದೆ. ಇಡಿ ದೂರಿನ ಮೇರೆಗೆ ಬೆಂಗಳೂರಿನ ಕೊತ್ತನೂರು ಪೊಲೀಸರು ಇದೇ ೧೧ ರಂದು ಭಾರತೀಯ ನ್ಯಾಯಸಂಹಿತೆ ಮತ್ತು ಕಾನೂನು ಬಾಹಿರ ಚಟುವಟಿಕೆ ತಡೆಗಟ್ಟುವಿಕೆ ಕಾಯ್ದೆಯಡಿ ಪ್ರರಕಣ ದಾಖಲಿಸಿದ್ದಾರೆ. ಏಪ್ರಿಲ್ ೧೮ ಮತ್ತು ೧೯ ರಂದು ಆದಾತ ತೆರಿಗೆ ಕಾಯ್ದೆ ಮತ್ತು ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆಯಡಿ ನಡೆಸಿದ ಶೋಧ ಕಾರ್ಯದಲ್ಲಿ ಆರೋಪಿಗಳು ಅಮೆರಿಕ ಮೂಲದ ಸಂಸ್ಥೆಯೊಂದರ ಜೊತೆಗೆ ಸಂಪರ್ಕ ಹೊಂದಿದ್ದು, ಅಕ್ರಮ ಹಣ ವರ್ಗಾವಣೆಗಾಗಿ ಅಮೆರಿಕದ ಬ್ಯಾಂಕ್ ನೀಡಿದ ವಿದೇಶಿ ಮೂಲದ ಡೆಬಿಟ್ ಕಾರ್ಡ್‌ಗಳನ್ನು ಬಳಸಿದ್ದಾರೆ. ೨೦೨೫ರ ನವೆಂಬರ್‌ನಿಂದ ೨೦೨೬ರ ಏಪ್ರಿಲ್ ನಡುವೆ ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ ಮತ್ತು ವಿದೇಶಿ ಕೊಡುಗೆ ನಿಯಂತ್ರಣ ಕಾಯ್ದೆಯ ನಿಬಂಧನೆಗಳನ್ನು ಉಲ್ಲಂಘಿಸಿ ಸುಮಾರು ೯೨ ಕೋಟಿ ೫೫ ಲಕ್ಷ ರೂಪಾಯಿಗಳನ್ನು ಅಕ್ರಮವಾಗಿ ವರ್ಗಾವಣೆ ಮಾಡಲಾಗಿದೆ ಎಂದು ಇಡಿ ತಿಳಿಸಿದೆ.

<><><><>

ಇಂದು ವಿಶ್ವ ರಕ್ತದಾನಿಗಳ ದಿನ. ಜಗತ್ತಿನಾದ್ಯಂತ ವಿವಿಧ ದೇಶಗಳಲ್ಲಿ ಸ್ವಯಂ ಪ್ರೇರಿತ ರಕ್ತದಾನ ಶಿಬಿರಗಳನ್ನು ಆಯೋಜಿಸಿ ರಕ್ತದಾನದ ಮಹತ್ವ ಮತ್ತು ಪ್ರಯೋಜನಗಳ ಕುರಿತು ಸಮಾಜದಲ್ಲಿ ಅರಿವು ಮೂಡಿಸಲಾಗುತ್ತಿದೆ. ಹೆರಿಗೆ, ಅಪಘಾತ, ವಿವಿಧ ಶಸ್ತ್ರಚಿಕಿತ್ಸೆ, ರಕ್ತಹೀನತೆ ಇನ್ನಿತರ ತುರ್ತು ಸಂದರ್ಭಗಳಲ್ಲಿ ಆಸ್ಪತ್ರೆಗಳಲ್ಲಿ ರಕ್ತದ ಅವಶ್ಯಕತೆ ಇರುತ್ತದೆ. ೧೮ ವರ್ಷದಿಂದ ೬೦ ವರ್ಷದೊಳಗಿನ ೪೫ ಕೆ.ಜಿ.ಗಿಂತ ಹೆಚ್ಚು ತೂಕವಿರುವ ಪ್ರತಿಯೊಬ್ಬ ಆರೋಗ್ಯವಂತ ವ್ಯಕ್ತಿಯೂ ಆರು ತಿಂಗಳಿಗೊಮ್ಮೆ ಸ್ವಯಂಪ್ರೇರಿತವಾಗಿ ರಕ್ತದಾನ ಮಾಡಬಹುದಾಗಿದೆ. ಒಬ್ಬ ವ್ಯಕ್ತಿ ಮಾಡುವ ರಕ್ತದಾನದಿಂದ ಕನಿಷ್ಠ ಮೂರು ಪ್ರಾಣಗಳನ್ನು ಉಳಿಸಲು ಅನುಕೂಲವಾಗುತ್ತದೆ. ವಿಶ್ವ ರಕ್ತದಾನಿಗಳ ದಿನದ ಅಂಗವಾಗಿ ಕಷ್ಟದ ಸಮಯದಲ್ಲಿ ಕುಟುಂಬಗಳಿಗೆ ಬೆಂಬಲ ನೀಡುವ, ನಮ್ಮ ಸಮಾಜದಲ್ಲಿ ಸಹಾನುಭೂತಿಯ ಮನೋಭಾವವನ್ನು ಬಲಪಡಿಸುವ ರಕ್ತದಾನಿಗಳಿಗೆ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಧನ್ಯವಾದ ತಿಳಿಸಿದ್ದಾರೆ. ರಕ್ತದಾನ ಸಂಸ್ಕೃತಿ ಪೋಷಿಸುವುದನ್ನು ಮುಂದುವರಿಸೋಣ ಮತ್ತು ಹೆಚ್ಚಿನ ಜನರು ರಕ್ತದಾನ ಮಾಡಲು ಪ್ರೇರೇಪಿಸೋಣ ಎಂದು ಮುಖ್ಯಮಂತ್ರಿ ಕರೆ ನೀಡಿದ್ದಾರೆ.

<><><><>

ಉತ್ತರ ಕನ್ನಡ ಲೋಕಸಭಾ ಕ್ಷೇತ್ರ ವ್ಯಾಪ್ತಿಯ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಕೇಂದ್ರ ಸರ್ಕಾರದಿಂದ ೫೯ ಕೋಟಿ ೫೦ ಲಕ್ಷ ರೂಪಾಯಿ ಅನುದಾನ ಮಂಜೂರಾಗಿದೆ ಎಂದು ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ತಿಳಿಸಿದ್ದಾರೆ. ಕೇಂದ್ರ ರಸ್ತೆ ಅಭಿವೃದ್ಧಿ ನಿಧಿ ೨೦೨೬-೨೭ನೇ ಸಾಲಿನ ಯೋಜನೆಯಡಿ ಜಿಲ್ಲೆಯ ಎಂಟು ವಿಧಾನಸಭಾ ಕ್ಷೇತ್ರಗಳ ವ್ಯಾಪ್ತಿಯ ಆಯ್ದ ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ಅಭಿವೃದ್ಧಿಗೆ ಈ ಅನುದಾನವನ್ನು ಮಂಜೂರು ಮಾಡಲಾಗಿದೆ ಎಂದು ಅವರು ಹೇಳಿಕೆಯಲ್ಲಿ ತಿಳಿಸಿದ್ದಾರೆ. ಜಿಲ್ಲೆಯ ಪ್ರಮುಖ ರಸ್ತೆಗಳಿಗೆ ಅಗತ್ಯವಿರುವ ಸುಧಾರಣೆ ಹಾಗೂ ಅಭಿವೃದ್ಧಿ ಕಾಮಗಾರಿಗಳಿಗೆ ಈ ಅನುದಾನ ಬಳಕೆಯಾಗಲಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.

<><><><>

ಮುಖ್ಯಮಂತ್ರಿಗಳ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಕೋಲಾರದ ಮಾವು ಬೆಳೆಗಾರರ ಹಿತರಕ್ಷಣೆ ಹಾಗೂ ಎಪಿಎಂಸಿ ಮಾರುಕಟ್ಟೆಗೆ ಭೂಮಿ ಮಂಜೂರು ಕುರಿತು ಚರ್ಚಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್.ರವಿ ತಿಳಿಸಿದ್ದಾರೆ. ಜಿಲ್ಲೆಯ ಮಾವು ಬೆಳೆಗಾರರ ಹಿತದೃಷ್ಟಿಯಿಂದ

ಹಾಗೂ ಅವರು ಎದುರಿಸುತ್ತಿರುವ ಸಮಸ್ಯೆಗಳಿಗೆ ಪರಿಹಾರ ಒದಗಿಸುವ ನಿಟ್ಟಿನಲ್ಲಿ ಕಳೆದ ಸಾಲಿನಲ್ಲಿ ಮಂಜೂರು ಮಾಡಿದಂತೆ 'ಪಿಡಿಪಿಎಸ್' ಮಂಜೂರು ಮಾಡಲು ಸಭೆಯಲ್ಲಿ ಮನವಿ ಮಾಡಲಾಯಿತು ಎಂದು ಅವರು ಮಾಹಿತಿ ನೀಡಿದ್ದಾರೆ. ಉದ್ದೇಶಿತ ನೂತನ ಎಪಿಎಂಸಿ ಮಾರುಕಟ್ಟೆಗಾಗಿ ೮೦ ಎಕರೆ ಜಾಗವನ್ನು ಗುರುತಿಸಲಾಗಿದೆ. ಇದರಲ್ಲಿ ಯಾವುದೇ ತಕರಾರು ಅಥವಾ ವಿವಾದವಿಲ್ಲದ ೬೦ ಎಕರೆ ಜಾಗವನ್ನು ಎಪಿಎಂಸಿಗೆ ಹಸ್ತಾಂತರಿಸಲು ಈಗಾಗಲೇ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

<><><>

ಕೇಂದ್ರ ಶಿಕ್ಷಣ ಸಚಿವಾಲಯ ಸಹಯೋಗದಲ್ಲಿ ರಾಷ್ಟ್ರಮಟ್ಟದಲ್ಲಿ ಫೌಂಡೇಶನಲ್ ಲರ್ನಿಂಗ್ ಸ್ಟಡಿ ನಡೆಸಲಾಗುತ್ತಿದ್ದು, ಚಿತ್ರದುರ್ಗ ಜಿಲ್ಲೆಯಲ್ಲಿ ಜೂನ್ ೧೧ ಮತ್ತು ೧೨ರಂದು ನಡೆದ ಸಮೀಕ್ಷೆಯಲ್ಲಿ ೯೦ ವಿದ್ಯಾರ್ಥಿಗಳು ಭಾಗವಹಿಸಿದ್ದಾರೆ ಎಂದು ಡಯಟ್ ಪ್ರಾಚಾರ್ಯ ಎಂ.ನಾಸಿರುದ್ದೀನ್ ತಿಳಿಸಿದರು. ಸಮೀಕ್ಷಾದಾರರಿಗೆ ಜಿಲ್ಲಾ ಹಂತದಲ್ಲಿ ತರಬೇತಿ ನೀಡಿ, ಟ್ಯಾಬ್ಲೆಟ್ ಡಿಜಿಟಲ್ ತಂತ್ರಜ್ಞಾನದ ಮೂಲಕ ಸಮೀಕ್ಷೆ ನಡೆಸಲಾಗಿದೆ. ಪ್ರಸಕ್ತ ವರ್ಷ ೪ನೇ ತರಗತಿಯಲ್ಲಿ ಅಧ್ಯಯನ ಮಾಡುತ್ತಿರುವ ವಿದ್ಯಾರ್ಥಿಗಳ ಮೂಲಭೂತ ಭಾಷಾ ಕೌಶಲ ಮತ್ತು ಸಂಖ್ಯಾಜ್ಞಾನ ಕೌಶಲ ಪರೀಕ್ಷಿಸಲಾಗಿದೆ ಎಂದು ತಿಳಿಸಿದರು. ನೋಡಲ್ ಅಧಿಕಾರಿ ಎಲ್.ರೇವಣ್ಣ ಮಾತನಾಡಿ, ಶಾಲಾ ಪ್ರಶ್ನಾವಳಿ ಮೂಲಕ ಮೂಲಭೂತ ಸೌಲಭ್ಯಗಳು, ಶಿಕ್ಷಕರ ಪ್ರಶ್ನಾವಳಿಯಿಂದ ವಿದ್ಯಾರ್ಹತೆ ಮತ್ತು ವೃತ್ತಿಪರ ಮಾಹಿತಿ, ವಿದ್ಯಾರ್ಥಿ ಪ್ರಶ್ನಾವಳಿ ಮೂಲಕ ಕಲಿಕಾ ಪ್ರಗತಿ ಮೌಲ್ಯಮಾಪನ ಮಾಡಲಾಗುವುದು ಎಂದರು.

<><><>

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ನಗರಸಭೆ, ಸಹಯೋಗದೊಂದಿಗೆ ಕಸವಿಂಗಡಣೆ ಮತ್ತು ತ್ಯಾಜ್ಯ ನಿರ್ವಹಣೆ ಕುರಿತ ಜಾಗೃತಿ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಡಾ.ಕೆ.ಎನ್.ಅನುರಾಧ ಚಾಲನೆ ನೀಡಿದರು.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>